# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 110 |
| ಸದಸ್ಯರ ಹೆಸರು | | ಶ್ರೀಮತಿ ಹೇಮಲತಾ ನಾಯಕ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | | 09-12-2024 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಮಂಜೂರಾಗಿರುವ ವಸತಿಯುಕ್ತ ಪದವಿ ಮಹಾವಿದ್ಯಾಲಯಗಳು ಎಷ್ಟು; (ವಿವರ ನೀಡುವುದು) | ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಈ ಕೆಳಕಂಡ ಒಟ್ಟು 05 ಸ್ಥಳಗಳಲ್ಲಿ ವಸತಿಯುಕ್ತ ಪದವಿ ಮಹಾವಿದ್ಯಾಲಯಗಳು ಮಂಜೂರಾಗಿರುತ್ತವೆ; |
| ಆ) | ಸದರಿ ಮಹಾವಿದ್ಯಾಲಯಗಳು ಪ್ರಾರಂಭವಾಗದಿರಲು ಕಾರಣವೇನು; ಅಲ್ಲಿ ಲಭ್ಯವಿರುವ ಸೌಲಭ್ಯಗಳೇನು; (ವಿವರ ನೀಡುವುದು) | 1) ಬೀದರ್ ಜಿಲ್ಲೆಯ ಘೋಡಂಪಳ್ಳಿ (ಹಾಲಹಳ್ಳಿ)<br>2) ಯಾದಗಿರಿ ಜಿಲ್ಲೆಯ ಮುದ್ನಾಳ<br>3) ಕಲಬುರಗಿ ಜಿಲ್ಲೆಯ ಗುಂಡೇಪಲ್ಲಿ<br>4) ರಾಯಚೂರು ಜಿಲ್ಲೆಯ ಕವಿತಾಳ<br>5) ಕೊಪ್ಪಳ ಜಿಲ್ಲೆಯ ತಳಬಾಳ |
| ಇ) | ಸದರಿ ಮಹಾವಿದ್ಯಾಲಯಗಳಲ್ಲಿ ವಸತಿ ನಿಲಯಗಳನ್ನು ಪ್ರಾರಂಭಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವ ಕಾರಣಕ್ಕೆ ವಸತಿ ನಿಲಯ ಪ್ರಾರಂಭಿಸಿರುವುದಿಲ್ಲ; ಇದರಿಂದ ಸರ್ಕಾರದ ಉದ್ದೇಶಕ್ಕೆ ಧಕ್ಕೆಯಾಗುವುದಿಲ್ಲವೇ; (ವಿವರ ನೀಡುವುದು) | ಸದರಿ ಮಹಾವಿದ್ಯಾಲಯಗಳಲ್ಲಿ ಭೌತಿಕ ಮೂಲ ಸೌಕರ್ಯಗಳಾದ ತರಗತಿ ಕೊಠಡಿಗಳು, ಪ್ರಯೋಗಾಲಯ, ಗ್ರಂಥಾಲಯ, ಶೌಚಾಲಯಗಳು, ಮಹಿಳಾ ವಿಶ್ರಾಂತಿ ಕೊಠಡಿ, ಸಭಾಂಗಣ, ವಸತಿ ನಿಲಯ ಮತ್ತು ಭೋಜನಾಲಯ ಸೌಲಭ್ಯಗಳಿರುತ್ತವೆ.<br><br>• ಸದರಿ ಕಾಲೇಜುಗಳು ಪ್ರಾರಂಭವಾಗಿರುತ್ತವೆ. ಆದರೆ, ಸದರಿ ಮಹಾವಿದ್ಯಾಲಯಗಳಲ್ಲಿನ ವಸತಿ ನಿಲಯಗಳಲ್ಲಿ ವಿವಿಧ ಮೂಲಭೂತ ಸೌಲಭ್ಯಗಳ ಕೊರತೆ ಹಾಗೂ ಈ ಹಿಂದೆ ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿದ್ದ ಪ್ರಯುಕ್ತ ಪ್ರಸ್ತುತ ಅವಶ್ಯಕ ಹುದ್ದೆಗಳ ಸೃಜನೆಯಾಗುತ್ತಿರುವುದರಿಂದ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಡಳಿತ ಸಿಬ್ಬಂದಿಗಳ ತೀವ್ರ ಕೊರತೆಯಿರುವುದರಿಂದ ಸದರಿ ವಿದ್ಯಾರ್ಥಿಗಳ ವಸತಿ ನಿಲಯಗಳನ್ನು ಪ್ರಾರಂಭಿಸಿರುವುದಿಲ್ಲ.<br><br>• ಈ ಮೇಲ್ಕಂಡ ಅಂಶದ ಹಿನ್ನಲೆಯಲ್ಲಿ, ಪ್ರಸ್ತಾಪಿತ 05 ವಿದ್ಯಾರ್ಥಿನಿಲಯಗಳನ್ನು ಒಳಗೊಂಡಂತೆ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಒಟ್ಟು 65 ವಸತಿ ನಿಲಯಗಳನ್ನು ಸಮಾಜ ಕಲ್ಯಾಣ ಇಲಾಖೆ / ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ತಾತ್ಕಾಲಿಕವಾಗಿ ಪ್ರಾರಂಭಿಸುವ ಕುರಿತು ಪರಿಶೀಲಿಸಲಾಗುತ್ತಿದೆ. |
| ಈ) | ವಸತಿ ನಿಲಯಗಳನ್ನು ಯಾವ ಇಲಾಖೆ ನಿರ್ವಹಣೆ ಮಾಡುತ್ತಿದೆ; ಈ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಯಾವ ಆಧಾರದಲ್ಲಿ ಪ್ರವೇಶ ನೀಡಲಾಗುತ್ತಿದೆ; ರೋಸ್ಟರ್ ಅನ್ವಯ ಪ್ರವೇಶ ನೀಡಲಾಗುತ್ತದೆಯೇ; (ವಿವರ ನೀಡುವುದು) | ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ವಸತಿ ನಿಲಯಗಳನ್ನು ಪ್ರಾರಂಭಿಸಿಲ್ಲದ ಕಾರಣ ವಿದ್ಯಾರ್ಥಿಗಳ ಪ್ರವೇಶಾತಿ ಪ್ರಶ್ನೆ ಉದ್ಭವಿಸುವುದಿಲ್ಲ. |

| | | |
|---|---|---|
| ಉ) | ಸದರಿ ಮಹಾವಿದ್ಯಾಲಯಗಳು ಯಾವ ವರ್ಷದಿಂದ ಪ್ರಾರಂಭಿಸಲಾಗಿದೆ; ಅವುಗಳಲ್ಲಿ ಲಭ್ಯವಿರುವ ಕೋರ್ಸ್‌ಗಳೆಷ್ಟು; ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಕೋರ್ಸ್‌ವಾರು ವಿವರ ನೀಡುವುದು) | ಸದರಿ ಕಾಲೇಜುಗಳನ್ನು ಪ್ರಾರಂಭಿಸಿರುವ ವರ್ಷ, ಲಭ್ಯವಿರುವ ಕೋರ್ಸ್ ಹಾಗೂ ವಿದ್ಯಾರ್ಥಿಗಳ ಮಾಹಿತಿಯನ್ನು **ಅನುಬಂಧ-1** ರಲ್ಲಿ ಒದಗಿಸಿದೆ. |
| ಊ) | ಸದರಿ ಮಹಾವಿದ್ಯಾಲಯಗಳಲ್ಲಿ ಮಂಜೂರಾಗಿರುವ ಹುದ್ದೆಗಳೆಷ್ಟು; ಭರ್ತಿಯಾಗಿರುವ ಹುದ್ದೆಗಳೆಷ್ಟು? (ವಿವರ ನೀಡುವುದು) | ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಂಜೂರಾದ, ಕರ್ತವ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಹುದ್ದೆಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವಿವರಗಳನ್ನು **ಅನುಬಂಧ-2** ರಲ್ಲಿ ಒದಗಿಸಿದೆ. |

ಇಡಿ 389 ಡಿಸಿಇ 2024 (ಇ)

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು